**ಕರ್ನಾಟಕ ಸರ್ಕಾರ**

**ಸಂಖ್ಯೆ:** ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 21.07.2020.

**ಆದೇಶ**

ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ:30.06.2020ರಲ್ಲಿ ಅನ್‌ಲಾಕ್-2 ಮಾರ್ಗಸೂಚಿಗಳನ್ನು ರಾಜ್ಯದ ಕಂಟೈನ್‌ಮೆಂಟ್ ವಲಯಗಳ ಹೊರಗಿನ ಪ್ರದೇಶಗಳಲ್ಲಿ ಚಟುವಟಿಕೆಗಳ ಪುನರ್ ಆರಂಭಕ್ಕೆ ಮತ್ತು ಕಂಟೈನ್‌ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ವಿಸ್ತರಿಸಲು ಅನುಮತಿಸಲಾಗಿದೆ.

ರಾಜ್ಯ ಸರ್ಕಾರವು, ಬೆಂಗಳೂರು ಪ್ರದೇಶದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗದ ಪ್ರಕರಣಗಳು ಹೆಚ್ಚಾದ ಹಿನ್ನಲೆಯಲ್ಲಿ, ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020 ದಿನಾಂಕ:13.07.2020ರಲ್ಲಿ ಕೋವಿಡ್-19ರ ಹರಡುವಿಕೆಯನ್ನು ನಿಯಂತ್ರಿಸುವುದಕ್ಕಾಗಿ ದಿನಾಂಕ:14.07.2020 ರಿಂದ ರಾತ್ರಿ 8.00 ಘಂಟೆಯಿಂದ ದಿನಾಂಕ:22.07.2020ರಂದು ಬೆಳಿಗ್ಗೆ 5.00 ಘಂಟೆವರೆಗೆ 7 ದಿನಗಳವರೆಗೆ ಲಾಕ್‌ಡೌನ್ ಜಾರಿಗೊಳಿಸಿ ಮಾರ್ಗಸೂಚಿಯನ್ನು ಹೊರಡಿಸಿದೆ.

ರಾಜ್ಯ ಸರ್ಕಾರವು, ಕೋವಿಡ್-19 ಹರಡುವಿಕೆಯನ್ನು ನಿಯಂತ್ರಿಸಲು ಸೋಂಕು ಪತ್ತೆ ಹಚ್ಚುವಿಕೆ, ಪರೀಕ್ಷೆ, ಟ್ರ್ಯಾಕಿಂಗ್, ತಾಂತ್ರಿಕತೆ ಉಪಯೋಗಿಸಿ ಚಿಕಿತ್ಸೆ ನೀಡುವುದು ಮತ್ತು ವೈದ್ಯಕೀಯ, ಅರೆ ವೈದ್ಯಕೀಯ ಹಾಗೂ ಇತರೆ ಸಿಬ್ಬಂದಿಗಳನ್ನೊಳಗೊಂಡ ಮಾನವ ಸಂಪನ್ಮೂಲವನ್ನು ನಿಯೋಜಿಸುವ ಮೂಲಕ ಸಾಧ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಂಡಿದ್ದು, ಬೆಂಗಳೂರು ಪ್ರದೇಶದಲ್ಲಿ ಆರೋಗ್ಯ ಸೇವಾ ಸೌಲಭ್ಯವನ್ನು ಹೆಚ್ಚಿಸಿದೆ.

ಆದ್ದರಿಂದ, ವಿಪತ್ತು ನಿರ್ವಹಣಾ ಕಾಯ್ದೆ, 2005ರ ಸೆಕ್ಷನ್ 24 (ಎಲ್) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಲಾದ ನಾನು, ಈ ಮೂಲಕ ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ:30.06.2020ರಲ್ಲಿ ಜಾರಿಗೆ ತರಲಾಗಿರುವ ಅನ್‌ಲಾಕ್-2.0ಅನ್ನು ಮಾರ್ಗಸೂಚಿಗಳಲ್ಲಿ ಕೆಲ ಬದಲಾವಣೆಯೊಂದಿಗೆ ದಿನಾಂಕ:22.07.2020 ಬೆಳಿಗ್ಗೆ 5.00 ರಿಂದ ದಿನಾಂಕ:31.07.2020 ರವರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಒಳಗೊಂಡ ಬೆಂಗಳೂರು ಪ್ರದೇಶದಲ್ಲಿ ಮರು ಜಾರಿಗೊಳಿಸಲಾಗಿದೆ:

**ಅನ್‌ಲಾಕ್ -2.0 ಮಾರ್ಗಸೂಚಿಗಳಿಗೆ ಮಾರ್ಪಾಡು:**

1. **ರಾತ್ರಿ ಕರ್ಫ್ಯೂಗೆ ಸಂಬಂಧಿಸಿದಂತೆ ಖಂಡ-2:** ರಾಜ್ಯಾದ್ಯಂತ ರಾತ್ರಿ ಕರ್ಫ್ಯೂ ರಾತ್ರಿ 9.00 ಘಂಟೆಯಿಂದ ಬೆಳಿಗ್ಗೆ 5.00 ಘಂಟೆಯವರೆಗೆ ಜಾರಿಯಲ್ಲಿರುತ್ತದೆ.
2. **ಭಾನುವಾರದ ಲಾಕ್‌ಡೌನ್‌ಗೆ ಸಂಬಂಧಿಸಿದಂತೆ ಖಂಡ-3:** ಪ್ರಸ್ತುತ ಚಾಲ್ತಿಯಲ್ಲಿರುವಂತೆ ಪ್ರತಿ ಭಾನುವಾರ ಲಾಕ್‌ಡೌನ್ ಮುಂದುವರೆಯಲಿದೆ.

...2.

**ಅನ್‌ಲಾಕ್-2.0 ಮಾರ್ಗಸೂಚಿಗಳ ಅನುಬಂಧ-1ಕ್ಕೆ (ಕೋವಿಡ್-19 ನಿರ್ವಹಣೆಗೆ ರಾಷ್ಟ್ರೀಯ ನಿರ್ದೇಶನಗಳು):**

**ಖಂಡ (2):**

1) ಖಂಡ -2 ರಡಿ ಖಂಡ 2(ಎ) ಮತ್ತು 2(ಬಿ) ಅನ್ನು ಸೇರಿಸಲಾಗಿದೆ:

2(ಎ) ಜನಸಂದಣಿಯನ್ನು ತಡೆಗಟ್ಟುವ ಹಿನ್ನಲೆಯಲ್ಲಿ ತರಕಾರಿ ಮಾರುಕಟ್ಟೆಗಳನ್ನು ಬೆಂಗಳೂರು ಮಾತ್ರವಲ್ಲದೇ ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲೂ ಎ.ಪಿ.ಎಂ.ಸಿ ಅಥವಾ ಸೂಕ್ತ ವಿಶಾಲ ಪ್ರದೇಶಗಳಿಗೆ ಸ್ಥಳಾಂತರಿಸುವುದು.

2(ಬಿ) ಉದ್ಯಾನವನಗಳಲ್ಲಿ ಜಿಮ್ ಸಲಕರಣೆಗಳು ಮತ್ತು ಕುಳಿತುಕೊಳ್ಳುವ ಬೆಂಚ್‌ಗಳ ಬಳಸುವಿಕೆ ನಿಷೇಧಿಸುವುದು.

ಇದಲ್ಲದೇ, ಆನ್‌ಲಾಕ್-2.0ರ ಮಾರ್ಗಸೂಚಿಗಳು ಮೇಲೆ ತಿಳಿಸಿರುವ ಬದಲಾವಣೆಯೊಂದಿಗೆ ಜಿಲ್ಲಾಡಳಿತಗಳಿಂದ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸುವವರೆಗೂ ದಿನಾಂಕ: 31.07.2020ರವರೆಗೆ ರಾಜ್ಯದ ಉಳಿದ ಭಾಗಗಳಲ್ಲಿ ಜಾರಿಯಲ್ಲಿರುತ್ತವೆ.

**(ಟಿ.ಎಂ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಹಾಗೂ
ಅಧ್ಯಕ್ಷರು, ರಾಜ್ಯ ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.